# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಕೋಡಿಹಳ್ಳಿ ಮತ್ತು ಇತರೆ 16 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಯ Variations ಮತ್ತು ಕಾಲಾವಧಿ ವಿಸ್ತರಣೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ:ಗ್ರಾಕುನೀ&ನೈಇ/87/ಮುಇಂ/ತಾಂತ್ರಿಕ/2018-19 ದಿನಾಂಕ:03.06.2019.
2. ದಿನಾಂಕ:20.12.2021ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variation & EOT ಪ್ರಾಧಿಕಾರ ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತ ಸಂಖ್ಯೆ:ಗ್ರಾಕುನೀ&ನೈಇ/87/ಮುಇಂ/ತಾಂತ್ರಿಕ/2018-19.

---

**<u>ಪೀಠಿಕೆ:</u>**

ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಕೋಡಿಹಳ್ಳಿ ಮತ್ತು ಇತರೆ 16 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ **ರೂ.1044.00ಲಕ್ಷಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸದರಿ ಯೋಜನೆ ಕಾಮಗಾರಿಯ ಟೆಂಡರ್ ಐಟಂಗಳ ಪ್ರಮಾಣಗಳಿಗಿಂತ ಹೆಚ್ಚುವರಿ ಅನುಷ್ಠಾನ ಹಾಗೂ ಟೆಂಡರ್‌ನಲ್ಲಿ ಇಲ್ಲದಿರುವ ಹೊಸ ಐಟಂಗಳನ್ನು ಸೇರ್ಪಡೆಗೊಳಿಸಿ ಅನುಷ್ಠಾನಗೊಳಿಸಿರುವುದರಿಂದ ಅಂದಾಜು ಮೊತ್ತ **ರೂ.1090.54ಲಕ್ಷಗಳಿಗೆ** ಪರಿಷ್ಕೃತವಾಗಿರುತ್ತದೆ.

ದಿನಾಂಕ:20.12.2021ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಗಳ Variation in tender items and in new items & EOT ಪ್ರಾಧಿಕಾರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಮತ್ತು ದಂಡರಹಿತ, ಕಾಲಾವಧಿ ವಿಸ್ತರಣೆ ಮಾಡಲು ಮೇಲೆ ಓದಲಾದ (3)ರ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಸದರಿ ಯೋಜನೆಗೆ ಅವಶ್ಯವಿರುವ VT pump & Motor ಲಾಕ್‌ಡೌನ್ ಸಮಯದಲ್ಲಿ ಪೂರೈಸಲು ವಿಳಂಬವಾಗಿದ್ದು ಒಟ್ಟು 74 ದಿನಗಳ ದಂಡ ರಹಿತ ಕಾಲಾವಧಿ ವಿಸ್ತರಣೆಗೆ ಅನುಮೋದನೆ ನೀಡಿದ್ದು, ಅನುಮೋದನೆ ನೀಡಬೇಕಾಗಿರುತ್ತದೆ.

ಆದ್ದರಿಂದ ಮೇಲೆ ಓದಲಾದ (2)ರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಮತ್ತು ಕಾಲಾವಧಿ ವಿಸ್ತರಣೆಗೆ ನಿಯಾಮಾನುಸಾರ ದಂಡ ರಹಿತ, ಅನುಮೋದನೆ ನೀಡುವ ಅವಶ್ಯವಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/259/ಗ್ರಾನೀಸ(4)2022 ಬೆಂಗಳೂರು, ದಿನಾಂಕ:27.04.2022.** 533

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಕೋಡಿಹಳ್ಳಿ ಮತ್ತು ಇತರೆ 16 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜು ಮೊತ್ತ **ರೂ.1090.54ಲಕ್ಷ (ಒಂದು ಸಾವಿರದ ತೊಂಭತ್ತು ಲಕ್ಷದ ಐವತ್ನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ** 2215-ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215-MVS) ಕಾರ್ಯಕ್ರಮದ ಅಡಿಯಲ್ಲಿ **ಹಾಗೂ 74 ದಿನಗಳ ದಂಡ ರಹಿತ ಕಾಲಾವಧಿ ವಿಸ್ತರಣೆಗೆ ಆಡಳಿತಾತ್ಮಕ** ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪ್ರಸ್ತಾಪಿತ ಕಾಮಗಾರಿಗೆ ಸಕ್ಷಮ ಪ್ರಾಧಿಕಾರದಿಂದ ಅವಶ್ಯವಿರುವ ಅನುಮೋದನೆ ಪಡೆದು ನಂತರ ಮುಂದಿನ ಕ್ರಮವಹಿಸಬೇಕು. ಅನುಮೋದನೆ ನೀಡಲಾದ ಅಂದಾಜಿನ ವ್ಯಾಪ್ತಿಯೊಳಗೆ ಕಾಮಗಾರಿಯನ್ನು ಅನುಷ್ಠಾನಗೊಳಿಸತಕ್ಕದ್ದು. ಅಂದಾಜು ಮೊತ್ತದಲ್ಲಿ ಯಾವುದೇ ರೀತಿಯ ಹೆಚ್ಚಳಕ್ಕೆ ಆಸ್ಪದ ನೀಡಬಾರದು.

3. ಈ ಆದೇಶದಲ್ಲಿ ಅನುಮೋದನೆಯಾಗಿರುವ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು ರವರ ಶಿಫಾರಸ್ಸು ಆಧರಿಸಿ ಅನುದಾನ ಬಿಡುಗಡೆಯಾಗತಕ್ಕದ್ದು ಹಾಗೂ ಸದರಿ ವೆಚ್ಚವನ್ನು 2022-23ರ ಸಾಲಿನ IMISನಲ್ಲಿ ಅಳವಡಿಸಲು ಸೂಚಿಸಿದೆ.

4. ಯೋಜನೆಯನ್ನು ಚಾಲ್ತಿ ಪಾರದರ್ಶಕ (KTPP ಕಾಯ್ದೆಯನ್ವಯ) ನೀತಿಯನ್ವಯ ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ನಿರ್ದೇಶಕರು,
ಗ್ರಾ.ಕು.ನೀ.&ನೈ ಇಲಾಖೆ ಹಾಗೂ ಪದನಿಮಿತ್ತ
ಉಪ ಕಾರ್ಯದರ್ಶಿ, ಗ್ರಾ.ಅಪಂ.ರಾಜ್ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ -AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಹಾಸನ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ. &. ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.

..3

7. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಹಾಸನ**.
9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಮೈಸೂರು**.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. &. ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಹಾಸನ**.
14. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. &. ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು). ಬಹುಮಹಡಿ ಕಟ್ಟಡ, ಬೆಂಗಳೂರು.
15. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
16. ಗ್ರಾ.ಅ. &. ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.